**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ 1061/2021** **CW**-5 **PW**-5

**ಸಾಕ್ಷಿಯನ್ನು ದಿಃ 27.11.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಶೇಖರ್ |
| ತಂದೆಯ ಹೆಸರುಃ | ದೇವರಾಜೇಗೌಡ |
| ವಯಸ್ಸುಃ | 44 ವರ್ಷ |
| ವೃತ್ತಿಃ | ವ್ಯವಸಾಯ |
| ವಾಸ ಸ್ಥಳಃ | ಮಲ್ಲವನಘಟ್ಟ ಗ್ರಾಮ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಸಾಕ್ಷಿಗೆ ಸ್ಥಳ ಮತ್ತು ಅಮಾನತ್ತು ಮಹಜರ್ ತೋರಿಸಲಾಗಿ, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು.

ಸುಮಾರು 3-4 ವರ್ಷಗಳ ಹಿಂದೆ ನಮ್ಮ ಗ್ರಾಮದ ಟೀ ಅಂಗಡಿ ಬಳಿ ಪೋಲೀಸ್ ಕೋರಿಕೆ ಮೇರೆಗೆ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿಲ್ಲ. ನಿಪಿ-2 ರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ನನ್ನ ಜೊತೆ ನಿಪಿ-2 ಕ್ಕೆ ಚಾಸಾ-6 ರವರು ಸಹಿ ಮಾಡಿದ್ದಾರೆ.

**(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿಃ 04.05.2021 ರಂದು ಬೆಳಗ್ಗೆ 10.00 ರಿಂದ 10.30 ಗಂಟೆ ಸಮಯದಲ್ಲಿ ಚಾಸಾ-1 ರವರ ಮನೆ ಮುಂದೆ ರಸ್ತೆಯಲ್ಲಿ ಪೋಲೀಸರು ಗಲಾಟೆ ಸಂಬಂಧ ಸ್ಥಳ

ಪಂಚನಾಮೆ ಕ್ರಮ ಜರುಗಿಸಿ ಚಾಸಾ–1 ರವರು ಸ್ಥಳವನ್ನು ತೋರಿಸಿದ್ದು ನಾನು ನಿಪಿ–2 ಕ್ಕೆ ಅಲ್ಲಿಯೇ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಮು ಮಾ 1 ನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ–2 ರಲ್ಲಿರುವ ಮಾಹಿತಿ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಡಿ ಕೆ ಎಂ ರವರಿಂದ ಃ**

ಆರೋಪಿ ಪರ ವಕೀಲರು ಪಾಟಿ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿದ್ದು ಅನುಮತಿಸಲಾಯಿತು.

**ಮರುವಿ ಚಾರಣೆಃ ಇಲ್ಲಾ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

**(ಕುಸುಮ ವಿ.)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.**